ಪ್ರತ್ಯೇಕ ಫಲಾನುಭವಿಗಳು ಇರುವುದಿಲ್ಲ.

ಹೊಸ ವಸತಿ (ವಿದ್ಯಾರ್ಥಿನಿಲಯ) ನಿಲಯಗಳ ಪ್ರಾರಂಭ

808 (1022) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ ವರ್ಷ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ವಿದ್ಯಾರ್ಥಿಗಳಿಗಾಗಿ ಎಷ್ಟು ಹೊಸ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಲಾಗಿತ್ತು?

ಆ) ಈವರೆಗೆ ಎಷ್ಟು ವಿದ್ಯಾರ್ಥಿ (ಹೊಸ) ನಿಲಯಗಳನ್ನು ಸ್ಥಾಪಿಸಲಾಗಿದೆ?

ಇ) ಮೆಟ್ರಿಕ್- ನಂತರದ ವಿದ್ಯಾರ್ಥಿನಿಯರಿಗಾಗಿ ಎಷ್ಟು ಹೊಸ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಲು ಕಳೆದ ವರ್ಷ ಸರ್ಕಾರ ನಿರ್ಧರಿಸಿತ್ತು; ಈವರೆಗೆ ಎಷ್ಟು ವಿದ್ಯಾರ್ಥಿನಿಯರ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಲಾಗಿದೆ?

ಈ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿನಿಯರಿಗಾಗಿ ಎಷ್ಟು ಹೊಸ ವಿದ್ಯಾರ್ಥಿನಿಲಯಗಳನ್ನು ಕಳೆದ ವರ್ಷ ಸ್ಥಾಪಿಸಲಾಗಿದೆ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) 1999-2000ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗಾಗಿ ಒಟ್ಟು 45 ಹಾಗೂ ಪರಿಶಿಷ್ಟ ವರ್ಗದವರಿಗಾಗಿ 5 ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿತ್ತು.

ಆ) ಈವರೆಗೆ ಹೊಸದಾಗಿ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ 45 ಹಾಗೂ ಪರಿಶಿಷ್ಟ ವರ್ಗದವರಿಗಾಗಿ 5 ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಲಾಗಿದೆ.

ಇ) ಕಳೆದ ವರ್ಷ ಸರ್ಕಾರವು ಪರಿಶಿಷ್ಟ ಜಾತಿಯ ವಿದ್ಯಾರ್ಥಿನಿಯರಿಗಾಗಿ 8 ಕಾಲೇಜು ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಲು ಗುರಿ ಹೊಂದಿದ್ದು, 8 ಕಾಲೇಜು ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿದೆ.

ಈ) ಕಳೆದ ವರ್ಷದಲ್ಲಿ ಪರಿಶಿಷ್ಟ ವರ್ಗದ ವಿದ್ಯಾರ್ಥಿನಿಯರಿಗಾಗಿ ಒಂದು ವಿದ್ಯಾರ್ಥಿನಿಲಯವನ್ನು ಮಂಜೂರು ಮಾಡಲಾಗಿದೆ. ಕಳೆದ ವರ್ಷ ಪರಿಶಿಷ್ಟ ಜಾತಿಯ ವಿದ್ಯಾರ್ಥಿನಿಯರಿಗಾಗಿ 4 ಮೆಟ್ರಿಕ್-ಪೂರ್ವ ಮತ್ತು 8 ಕಾಲೇಜು ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಲಾಗಿದೆ

ಶಿಥಿಲಗೊಂಡ ಸರ್ಕಾರಿ ರೇಷ್ಮೆ ಗೂಡಿನ ಮಾರುಕಟ್ಟೆಯಲ್ಲಿ ನಡೆಯುತ್ತಿರುವ ಅವ್ಯವಹಾರ

809 (1025) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?